# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ಹೇರೋಹಳ್ಳಿ ಉಪ-ವಿಭಾಗದ,
ವಾರ್ಡ್ ನಂ.40, ದೊಡ್ಡಬಿದರಕಲ್ಲು, ಕರಿಹೋಬನಹಳ್ಳಿ, ಬೆಂಗಳೂರು-5600 58.

---

**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ರಾ.ರಾ.ನಗರ ವಲಯ, ಹೇರೋಹಳ್ಳಿ ಉಪ-ವಿಭಾಗದ ವಾರ್ಡ್ ನಂ.40ರಲ್ಲಿ ದಿನಾಂಕ: 04.06.2022 ರಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿ.**

**ಈ ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.**

1. ಶ್ರೀ. ಡಾ|| ಮುರಳಿಧರ್, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು.
2. ಶ್ರೀ.ಚಿಕ್ಕಗೂಳಿಗೌಡ.ಜೆ.ಜಿ, ಸಹಾಯಕ ಅಭಿಯಂತರರು ಮತ್ತು ಕಾರ್ಯದರ್ಶಿ.
3. ಶ್ರೀಮತಿ.ಅನುಪಮ.ಡಿ, ವೈದ್ಯಾಧಿಕಾರಿ, ಸರ್ಕಾರಿ ಆಸ್ಪತ್ರೆ, ತಿಪ್ಪೇನಹಳ್ಳಿ.
4. ಶ್ರೀ.ರಮೇಶ್.ಡಿ.ಎಂ, ಹಿರಿಯ ಆರೋಗ್ಯ ಪರಿವೀಕ್ಷಕರು.
5. ಶ್ರೀ.ಮುತ್ತೇಗೌಡ.ವಿ ಕಿರಿಯ ಆರೋಗ್ಯ ಪರಿವೀಕ್ಷಕರು.
6. ಶ್ರೀ.ಕೆ.ಶ್ರೀನಿವಾಸಯ್ಯ, ಸಹ ಕಂದಾಯ ಅಧಿಕಾರಿ, ಕಂದಾಯ ಇಲಾಖೆ.
7. ಶ್ರೀ.ಗವಿಸಿದ್ದಯ್ಯ, ಸಹಾಯಕ ಅಭಿಯಂತರರು, ವಿದ್ಯುತ್ (ಬಿ.ಬಿ.ಎಂ.ಪಿ).
8. ಶ್ರೀ.ಎಸ್.ಆರ್,ಶಶಿಧರ, ಕಿರಿಯ ಅಭಿಯಂತರರು, ಬೆಸ್ಕಾಂ, ಅಂದ್ರಹಳ್ಳಿ.
9. ಶ್ರೀ.ವಿಜಯ.ಸಿ, ಕಿರಿಯ ಅಭಿಯಂತರರು, ಬೆಸ್ಕಾಂ, ದೊಡ್ಡಬಿದರಕಲ್ಲು.
10. ಶ್ರೀ.ಪವನ್.ಎಂ.ಬಿ, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
11. ಶ್ರೀ.ರೇಣುಕಯ್ಯ, ಸಹಾಯಕ ಸಬ್‌ಇನ್ಸ್‌ಪೆಕ್ಟರ್, ಪೀಣ್ಯ ಪೊಲೀಸ್ ಠಾಣೆ.
12. ಶ್ರೀ.ಶೇಖರ್.ಎಂ, ಪೊಲೀಸ್ ಕಾನ್ಸ್‌ಟೇಬಲ್, ಪೀಣ್ಯ ಪೊಲೀಸ್ ಠಾಣೆ.
13. ಶ್ರೀ.ಶರಣಪ್ಪ, ಪೊಲೀಸ್ ಕಾನ್ಸ್‌ಟೇಬಲ್, ಬ್ಯಾಡರಹಳ್ಳಿ ಪೊಲೀಸ್ ಠಾಣೆ.
14. ಶ್ರೀಲಕ್ಷ್ಮಿ.ಕೆ.ಆರ್, ಪ್ಲಾಂಟ್ ವ್ಯವಸ್ಥಾಪಕರು, ಘನ ತ್ಯಾಜ್ಯ ನಿರ್ವಹಣಾ ಘಟಕ.
15. ಶ್ರೀ.ಹೆಚ್.ಕೆ.ಕಗ್ಗಲಯ್ಯ, ಮೇಸ್ತ್ರಿ, ತೋಟಗಾರಿಕೆ ಇಲಾಖೆ.
16. ಶ್ರೀ.ಯೋಗೀಶ್.ಕೆ.ಆರ್, ಮಾರ್ಷಲ್. ದೊಡ್ಡಬಿದರಕಲ್ಲು.
17. ಶ್ರೀ.ಹನುಮೇಶ್, ಮಾರ್ಷಲ್. ದೊಡ್ಡಬಿದರಕಲ್ಲು.

**ವಾರ್ಡ್ ಸಮಿತಿ ಸದಸ್ಯರುಗಳು.**

1. ಶ್ರೀ.ಕೂರ್ಲಪ್ಪ, ತಿಗಳರಪಾಳ್ಯ, ಸದಸ್ಯರು.
2. ಶ್ರೀ.ಸತೀಶ್, ಹೊಸಹಳ್ಳಿ, ಸದಸ್ಯರು
3. ಶ್ರೀ.ಮಾಲತೇಶ್.ಹೆಚ್.ಬಿ, ದೊಡ್ಡಬಿದರಕಲ್ಲು, ಸದಸ್ಯರು.
4. ಶ್ರೀ.ಮಂಜುನಾಥ್.ಎಂ, ಚನ್ನನಾಯಕನಪಾಳ್ಯ, ಸದಸ್ಯರು.
5. ಶ್ರೀ.ಮುನಿನಾರಾಯಣಪ್ಪ, ಇಂದಿರಾನಗರ, ಸದಸ್ಯರು.
6. ಶ್ರೀ.ನಟರಾಜ್, ವಿದ್ಯಾಮಾನ್ಯನಗರ, ಸದಸ್ಯರು.
7. ಶ್ರೀ.ಗರುಡಪ್ಪ, ತಿಗಳರಪಾಳ್ಯ, ಸದಸ್ಯರು.
8. ಶ್ರೀಮತಿ.ಮಂಗಳಮ್ಮ, ಮಾರಣ್ಣ ಲೇಔಟ್, ಸದಸ್ಯರು.
9. ಶ್ರೀಮತಿ.ಸುಮಿತ್ರ, ಸಾಯಿಬಾಬಾ ಲೇಔಟ್, ಸದಸ್ಯರು.

**ಈ ಕೆಳಕಂಡ ಅಧಿಕಾರಿಗಳು ಸಭೆಯಲ್ಲಿ ಗೈರು ಹಾಜರಾಗಿರುತ್ತಾರೆ.**

1. ಶ್ರೀ.ರಮೇಶ್, ಪಶು ವೈದ್ಯರು.
2. ಶ್ರೀಮತಿ.ಪೂರ್ಣಿಮಾ.ಜಿ.ಬಿ, ಸಹಾಯಕ ಕಾರ್ಯಪಾಲಕ ಅಭಿಯಂತರರು, ಎಸ್.ಡಬ್ಲ್ಯೂ.ಎಂ, ಕೆಂಗೇರಿ
3. ಶ್ರೀಮತಿ.ಅಮೃತಸಾಯಿ, ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆರೆ ವಿಭಾಗ.
4. ಶ್ರೀ.ಅಮರನಾಥ್.ಎಂ, ಸಹಾಯಕ ಅಭಿಯಂತರರು, ಎಸ್.ಡಬ್ಲ್ಯೂ.ಡಿ.
5. ಕುಮಾರಿ.ಚಿತ್ರಿತಾ.ಎಂ, ಸಹಾಯಕ ಅಭಿಯಂತರರು, ಎಸ್.ಡಬ್ಲ್ಯೂ.ಡಿ.
6. ಶ್ರೀ.ಮೋಹನ್.ಎಸ್.ವಿ, ಸಹಾಯಕ ಕಾರ್ಯಪಾಲಕ ನಿಯಂತ್ರಣಾ ಅಧಿಕಾರಿ, ಬಿ.ಡಬ್ಲ್ಯೂ.ಎಸ್.ಎಸ್.ಬಿ.
7. ಶ್ರೀ.ಬಿ.ರಮೇಶ್, ಸಹಾಯಕ ಅಭಿಯಂತರರು, ಯೋಜನೆ ವಿಭಾಗ.

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯಲ್ಲಿ ಎಲ್ಲಾ ಸದಸ್ಯರುಗಳು ಹಾಗೂ ಅಧಿಕಾರಿಗಳು ಸ್ವಾಗತವನ್ನು ಕೋರಿ ಸಭೆಯ ಉದ್ದೇಶವನ್ನು ತಿಳಿಸಿ ಸಭೆಯಲ್ಲಿ ಉಪಸ್ಥಿತರಿದ್ದ ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳು ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

1) ವಾರ್ಡ್ ವ್ಯಾಪ್ತಿಯಲ್ಲಿನ ಆರೋಗ್ಯ ಇಲಾಖೆ ಬಗ್ಗೆ ಚರ್ಚಿಸಲಾದ ವಿಚಾರ.

- ವಾರ್ಡ್ ವ್ಯಾಪ್ತಿಯಲ್ಲಿ ಯಾವುದೇ ಕೋವಿಡ್ ಪ್ರಕರಣಗಳು ಕಂಡುಬಂದಿರುವುದಿಲ್ಲ ಎಂದು ಡಾ||.ಅನುಪಮ.ಡಿ ರವರು ಸಭೆಯಲ್ಲಿ ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಪೌರ ಕಾರ್ಮಿಕರಿಗೆ ಶೌಚಾಲಯ ನಿರ್ಮಿಸಲು ಹೊಸಹಳ್ಳಿ, ಗೊಲ್ಲರಪಾಳ್ಯದ ಸರ್ವೆ ನಂ.02 ರಲ್ಲಿ ಸರ್ಕಾರಿ ಜಾಗವಿದ್ದು, ಶೌಚಾಲಯಕ್ಕೆ ಉಪಯೋಗಿಸಿಕೊಳ್ಳುವಂತೆ ಸಭೆಯಲ್ಲಿ ಚರ್ಚಿಸಲಾಯಿತು.
- ವಾರ್ಡ್ ವ್ಯಾಪ್ತಿಯಲ್ಲಿ ಕಾರ್ಖಾನೆಗಳಿಂದ ಶಬ್ದ ಮಾಲಿನ್ಯವಾಗುತ್ತಿದ್ದು, ಇದನ್ನು ನಿಯಂತ್ರಿಸಲು ಸದರಿ ಕಾರ್ಖಾನೆಗಳಿಗೆ ನೋಟೀಸ್ ನೀಡಿ ಎಚ್ಚರಿಕೆ ನೀಡಲಾಗುತ್ತಿದೆ ಎಂದು ಹಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ತಿಳಿಸಿದರು.
- ವಾರ್ಡ್ ವ್ಯಾಪ್ತಿಯ ರಾಜಾಕಾಲುವೆಗಳಿಗೆ ಕೈಗಾರಿಕಾ ತ್ಯಾಜ್ಯ ಹಾಗೂ ಕಸ ಹಾಕುವವರಿಗೆ ಆಟೋಗೆ ಧ್ವನಿವರ್ಧಕಗಳನ್ನು ಬಳಸಿ ಎಚ್ಚರಿಕೆ ನೀಡಿ ದಂಡ ವಿಧಿಸುವಂತೆ ನೋಡಲ್ ಅಧಿಕಾರಿಗಳು ಹಿರಿಯ ಆರೋಗ್ಯ ಪರಿವೀಕ್ಷಕರವರಿಗೆ ಸಭೆಯಲ್ಲಿ ಸೂಚಿಸಿದರು.

2) ವಾರ್ಡ್ ವ್ಯಾಪ್ತಿಯಲ್ಲಿನ ವಿದ್ಯುತ್ ವಿಭಾಗ (ಬಿ.ಬಿ.ಎಂ.ಪಿ) ಬಗ್ಗೆ ಚರ್ಚಿಸಲಾದ ವಿಷಯಗಳು

- ವಾರ್ಡ್ ವ್ಯಾಪ್ತಿಯಲ್ಲಿ ಈಗಾಗಲೇ ಹೊಸ ಬೀದಿ ದೀಪಗಳ ಅಳವಡಿಕೆ ಕಾಮಗಾರಿ ಪ್ರಗತಿಯಲ್ಲಿದ್ದು, ಬೀದಿ ದೀಪಗಳನ್ನು ಅಳವಡಿಸುವ ಸಂದರ್ಭದಲ್ಲಿ ಆಯಾ ಸ್ಥಳದ ವಾರ್ಡ್ ಕಮಿಟಿ ಸದಸ್ಯರುಗಳ ಗಮನಕ್ಕೆ ತಂದು ಹೊಸ ಬೀದಿ ದೀಪ ಅಳವಡಿಸುವಂತೆ ಸಭೆಯಲ್ಲಿ ಚರ್ಚಿಸಲಾಯಿತು.
- ವಾರ್ಡ್ ವ್ಯಾಪ್ತಿಯಲ್ಲಿ ಒಂದೇ ವಿದ್ಯುತ್ ಕಂಬಕ್ಕೆ 2 ರಿಂದ 3 ಬೀದಿ ದೀಪಗಳನ್ನು ಅಳವಡಿಸಿದ್ದಾರೆಂದು ದೂರುಗಳು ಬಂದಿರುವುದರಿಂದ ಈ ಬಗ್ಗೆ ಪರಿಶೀಲಿಸಿ ಸೂಕ್ತ ಕ್ರಮಕೈಗೊಳ್ಳುವಂತೆ ನೋಡಲ್ ಅಧಿಕಾರಿಗಳು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

3) ವಾರ್ಡ್ ವ್ಯಾಪ್ತಿಯಲ್ಲಿನ ಪೋಲೀಸ್ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು

- ವಾರ್ಡ್ ವ್ಯಾಪ್ತಿಯಲ್ಲಿನ ಅಂದ್ರಹಳ್ಳಿ ಸರ್ಕಲ್‌ನಲ್ಲಿ ಆಟೋಗಳಿಂದ ಟ್ರಾಫಿಕ್ ಸಮಸ್ಯೆ ಹೆಚ್ಚಾಗಿದ್ದು, ಸಾರ್ವಜನಿಕರಿಗೆ ತೊಂದರೆಯಾಗುತ್ತಿರುತ್ತದೆ. ಆದುದರಿಂದ ಇದನ್ನು ನಿಯಂತ್ರಿಸುವಂತೆ ನೋಡಲ್ ಅಧಿಕಾರಿಗಳು ಬ್ಯಾಡರಹಳ್ಳಿ ಪೋಲೀಸ್ ಸಿಬ್ಬಂದಿಗೆ ಸೂಚಿಸಿದರು.
- ವಾರ್ಡ್ ವ್ಯಾಪ್ತಿಯ ದೊಡ್ಡಬಿದರಕಲ್ಲು ಭಾಗದಲ್ಲಿ ಪುಷ್ಪ ಎಂಬ ಮಹಿಳೆಗೆ ಆಟೋ ಚಾಲಕ ಮಧ್ಯ ದಾರಿಯಲ್ಲಿಯೇ ಅವರನ್ನು ಆಟೋದಿಂದ ಇಳಿಸಿ ಅವರ ಹತ್ತಿರ ಅಸಭ್ಯ ವರ್ತನೆ ಮಾಡಿರುವ ಬಗ್ಗೆ ಪೋಲೀಸ್ ಠಾಣೆಯಲ್ಲಿ ದೂರು ದಾಖಲಾಗಿದ್ದು, ತಪ್ಪಿತಸ್ಥನ ಮೇಲೆ ಸೂಕ್ತ ಕ್ರಮಕೈಗೊಳ್ಳುವಂತೆ ಸದಸ್ಯರುಗಳು ಸಭೆಯಲ್ಲಿ ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿನ ರಾಜ್‌ಕುಮಾರ್ ಬಾರ್, ಸಂಗಮ್ ಬಾರ್, ಮಧು ವೈನ್ಸ್ ಹಾಗೂ ಮೀನಾಕ್ಷಿ ಬಾರ್‌ಗಳ ಹತ್ತಿರ ಸಂಜೆಯ ಸಮಯದಲ್ಲಿ ವಾಹನಗಳ ಓಡಾಟಕ್ಕೆ ತೊಂದರೆಯಾಗುತ್ತಿದ್ದು, ಈ ಬಗ್ಗೆ ಸದರಿ ಬಾರ್‌ಗಳಿಗೆ ದಂಡವನ್ನು ವಿಧಿಸಿ ಎಚ್ಚರಿಕೆ ನೀಡಿ ಸೂಕ್ತ ಕ್ರಮಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

4) ವಾರ್ಡ್ ವ್ಯಾಪ್ತಿಯಲ್ಲಿನ ಬಿ.ಡಬ್ಲ್ಯೂ.ಎಸ್.ಎಸ್.ಬಿ ಬಗ್ಗೆ ಚರ್ಚಿಸಲಾದ ವಿಷಯಗಳು

- ವಾರ್ಡ್ ವ್ಯಾಪ್ತಿಯಲ್ಲಿ ಚನ್ನನಾಯಕಪಾಳ್ಯ ಕಾಲೋನಿಯಲ್ಲಿ ಮತ್ತು ಮುನೇಶ್ವರ ಬಡಾವಣೆ ತಿಗಳರಪಾಳ್ಯಗಳಲ್ಲಿ ಒಳಚರಂಡಿ ಕಾಮಗಾರಿ ಪೂರ್ಣಗೊಂಡಿವೆಲ್ಲವೆಂದು ಸದಸ್ಯರು ಸಭೆಯಲ್ಲಿ ತಿಳಿಸಿದರು.
- ವಾರ್ಡ್ ವ್ಯಾಪ್ತಿಯ ಇಂದಿರಾನಗರ ಬಸ್ ಸ್ಟಾಪ್ ನಿಂದ ಗಂಗಾ ಇಂಟರ್ ನ್ಯಾಷನಲ್ ಸ್ಕೂಲ್‌ವರೆಗೆ 3 ದಿನಗಳೊಳಗಾಗಿ ಹೆಚ್.ಸಿ ಛೇಂಬರ್ ಅನ್ನು ಅಳವಡಿಸಬೇಕೆಂದು ಸದಸ್ಯರುಗಳು ಸಭೆಯಲ್ಲಿ ತಿಳಿಸಿದರು.

5) ವಾರ್ಡ್ ವ್ಯಾಪ್ತಿಯಲ್ಲಿನ ಕಾಮಗಾರಿ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು

- ವಾರ್ಡ್ ವ್ಯಾಪ್ತಿಯಲ್ಲಿ ಬೋರ್ ವೆಲ್ ಕೊರೆಯುವ ಬಗ್ಗೆ ಯೋಜನೆ ವಿಭಾಗದ ಅಭಿಯಂತರರೊಂದಿಗೆ ಚರ್ಚಿಸಿ ಮಾಹಿತಿ ನೀಡುವಂತೆ ಸಭೆಯಲ್ಲಿ ಚರ್ಚಿಸಲಾಯಿತು.
- ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ವಾರ್ಡ್ ಕಮಿಟಿ ಗಮನಕ್ಕೆ ತರಬೇಕೆಂದು ಸದಸ್ಯರುಗಳು ಸಭೆಯಲ್ಲಿ ತಿಳಿಸಿದರು.

6) **ವಾರ್ಡ್ ವ್ಯಾಪ್ತಿಯಲ್ಲಿನ ಬಿ.ಎಂ.ಟಿ.ಸಿ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು**

- ವಾರ್ಡ್ ವ್ಯಾಪ್ತಿಯ ಪಂಚಮುಖಿ ಗಣೇಶ ದೇವಸ್ಥಾನ, ದೊಡ್ಡಬಿದರಕಲ್ಲು ಸರ್ಕಲ್ ಮತ್ತು ಸುವರ್ಣ ನಗರಗಳಲ್ಲಿ ಬಸ್ ಸೌಲಭ್ಯ ನೀಡುವಂತೆ ಸದಸ್ಯರುಗಳು ಸಭೆಯಲ್ಲಿ ತಿಳಿಸಿದರು.

7) **ವಾರ್ಡ್ ವ್ಯಾಪ್ತಿಯಲ್ಲಿನ ಕಂದಾಯ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು**

- ಕಂದಾಯ ಇಲಾಖೆ ಸಿಬ್ಬಂದಿಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿಲ್ಲದಿರುವ ಬಗ್ಗೆ ಹಲವಾರು ದೂರುಗಳು ಬಂದಿರುತ್ತದೆ. ಆದುದರಿಂದ ಮುಂದಿನ ವಾರ್ಡ್ ಕಮಿಟಿ ಸಭೆಗಳಿಗೆ ಸಹ ಕಂದಾಯ ಅಧಿಕಾರಿಗಳು ಹಾಗೂ ಎಲ್ಲಾ ಆರ್.ಐ ಮತ್ತು ಟಿ.ಐ ಗಳು ಖಾತಾ ಮತ್ತು ಕಂದಾಯದ ಪ್ರತಿ ಮಾಹೆವಾರು ಮಾಹಿತಿಯೊಂದಿಗೆ ಕಡ್ಡಾಯವಾಗಿ ಸಭೆಗೆ ಹಾಜರಾಗುವಂತೆ ನೋಡಲ್ ಅಧಿಕಾರಿಗಳು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

8) **ವಾರ್ಡ್ ವ್ಯಾಪ್ತಿಯಲ್ಲಿನ ಕಲ್ಯಾಣ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು**

- ವಾರ್ಡ್ ವ್ಯಾಪ್ತಿಯಲ್ಲಿ 2018 ನೇ ಸಾಲಿನ ವಿದ್ಯಾರ್ಥಿಗಳಿಗೆ ಲಾಪ್‌ಟಾಪ್ ವಿತರಣೆಗೆ ಅರ್ಜಿಯನ್ನು ಸಲ್ಲಿಸಿದ್ದು, ಇಲ್ಲಿಯವರೆಗೂ ಯಾವದೇ ತರಹದ ಲಾಪ್‌ಟಾಪ್ ವಿತರಣೆ ಮಾಡಿಲ್ಲವೆಂದು ಸದಸ್ಯರುಗಳು ಸಭೆಯಲ್ಲಿ ತಿಳಿಸಿದರು.

9) **ವಾರ್ಡ್ ವ್ಯಾಪ್ತಿಯಲ್ಲಿನ ಎಸ್.ಡಬ್ಲ್ಯೂ.ಎಂ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು**

- ವಾರ್ಡ್ ವ್ಯಾಪ್ತಿಯ ಘನ ತ್ಯಾಜ್ಯ ನಿರ್ವಹಣಾ ಘಟಕದಲ್ಲಿ ದುರ್ವಾಸನೆ ಬರುತ್ತಿದ್ದು, ಅದನ್ನು ನಿಯಂತ್ರಿಸಲು ಸೂಕ್ತ ಕ್ರಮಕೈಗೊಳ್ಳುವಂತೆ ಸಭೆಯಲ್ಲಿ ಚರ್ಚಿಸಲಾಯಿತು.
- ಘನ ತ್ಯಾಜ್ಯ ನಿರ್ವಹಣಾ ಘಟಕಕ್ಕೆ ಸಂಬಂಧಿಸಿದ ನಿಯಮಗಳು ಮತ್ತು ಷರತ್ತುಗಳನ್ನು ಮುಂದಿನ ಸಭೆಗೆ ತರುವಂತೆ ನೋಡಲ್ ಅಧಿಕಾರಿಗಳು ಸಂಬಂಧಪಟ್ಟ ಅಧಿಕಾರಿಗಳಿಗೆ ಸಭೆಯಲ್ಲಿ ಸೂಚಿಸಿದರು.

10) **ವಾರ್ಡ್ ವ್ಯಾಪ್ತಿಯಲ್ಲಿನ ಬೆಸ್ಕಾಂ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು**

- ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆಯಲ್ಲಿರುವ ವಿದ್ಯುತ್ ಕಂಬಗಳನ್ನು ಸ್ಥಳಾಂತರಿಸುವಂತೆ ಸದಸ್ಯರುಗಳು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.
- ವಾರ್ಡ್ ವ್ಯಾಪ್ತಿಯ ದೊಡ್ಡಬಿದರಕಲ್ಲು ವಿಭಾಗದ ಬೆಸ್ಕಾಂ ಇಲಾಖೆಯ ಸಹಾಯಕ ಅಭಿಯಂತರರಾದ ಓಬಯ್ಯರವರು ಸಾರ್ವಜನಿಕ ದೂರುಗಳಿಗೆ ಸರಿಯಾಗಿ ಸ್ಪಂದಿಸುತ್ತಿಲ್ಲವೆಂದು ಸದಸ್ಯರುಗಳು ಸಭೆಯಲ್ಲಿ ತಿಳಿಸಿದರು.

**ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಸೂಚಿಸಿದರು.**

**ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.**

**ಸದಸ್ಯ ಕಾರ್ಯದರ್ಶಿ**
**ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ ನಂ.40, ದೊಡ್ಡಬಿದರಕಲ್ಲು**

**ವಾರ್ಡ್ ಸಮಿತಿ ಅಧ್ಯಕ್ಷರು**
**ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ**
**ವಾರ್ಡ್ ನಂ.40, ದೊಡ್ಡಬಿದರಕಲ್ಲು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

<u>ಪ್ರತಿಯನ್ನು:-</u>

<u>ಅಧಿಕಾರಿಗಳ ಮಾಹಿತಿಗಾಗಿ</u>

1. ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ. ರವರ ಆಪ್ತಶಾಖೆಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ರಾ.ರಾ.ನಗರ ವಲಯ ರವರ ಅವಹಾಹನೆಗಾಗಿ ಮಂಡಿಸಿದೆ.
3. ಮುಖ್ಯ ಅಭಿಯಂತರರು, ರಾ.ರಾ.ನಗರ ವಲಯ ರವರ ಅವಹಾಹನೆಗಾಗಿ ಮಂಡಿಸಿದೆ.
4. ಮಾನ್ಯ ತಹಶೀಲ್ದಾರ್ ಬೆಂಗಳೂರು ಉತ್ತರ ತಾಲ್ಲೂಕು ರವರ ಮಾಹಿತಿಗಾಗಿ ಕಳುಹಿಸಿದೆ.
5. ಉಪ ನಿಯಂತ್ರಕರು (ಹಣಕಾಸು), ರಾ.ರಾ.ನಗರ ವಲಯ ರವರ ಮಾಹಿತಿಗಾಗಿ ಕಳುಹಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಕೆಂ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೇ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.